**Akashvani : Bangalore**
**National Bulletin In Kannada**
**15.11.2024 / 19.35 hrs**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**

<u>**ಮುಖ್ಯಾಂಶಗಳು**</u>

**೧. ಬುಡಕಟ್ಟು ಗ್ರಾಮಗಳ ಮೂಲಸೌಕರ್ಯ ಅಭಿವೃದ್ಧಿಗೆ ೮೦ ಸಾವಿರ ಕೋಟಿ ರೂಪಾಯಿ; ಪ್ರಧಾನಿ ನರೇಂದ್ರ ಮೋದಿ ಘೋಷಣೆ**

**೨. ಮಹಾರಾಷ್ಟ್ರ, ಜಾರ್ಖಂಡ್ ವಿಧಾನಸಭಾ ಚುನಾವಣೆ; ರಾಜಕೀಯ ಪಕ್ಷಗಳಿಂದ ತೀವ್ರಗೊಂಡ ಪ್ರಚಾರ**

**೩. ಭಾರತೀಯ ಗ್ರಿಡ್ ಮೂಲಕ ನೇಪಾಳದಿಂದ ಬಾಂಗ್ಲಾದೇಶದವರೆಗೆ, ರವಾನೆಯಾಗುವ ಮೊದಲ ತ್ರಿಪಕ್ಷೀಯ ವಿದ್ಯುತ್ ವಹಿವಾಟಿಗೆ ಚಾಲನೆ**

**೪. ಶ್ರೀಲಂಕಾ ಸಂಸತ್ ಚುನಾವಣೆ; ಆಡಳಿತಾರೂಢ ನ್ಯಾಷನಲ್ ಪೀಪಲ್ಸ್ ಪವರ್ ಮೈತ್ರಿ ಕೂಟಕ್ಕೆ ಭಾರೀ ಜಯ**

**<><*<><>*><>**

ಬುಡಕಟ್ಟು ಗ್ರಾಮಗಳ ಮೂಲಸೌಕರ್ಯಕ್ಕಾಗಿ ಜನಜಾತೀಯ ಉತ್ಕರ್ಷ ಗ್ರಾಮ ಅಭಿಯಾನದಡಿ ೮೦ ಸಾವಿರ ಕೋಟಿ ರೂಪಾಯಿ ಒದಗಿಸಲಾಗುವುದು ಎಂದು ಎಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ಪ್ರಕಟಿಸಿದ್ದಾರೆ. ಅವರು ಬಿಹಾರದ ಜಾಮೂಯ್ ಜಿಲ್ಲೆಯಲ್ಲಿ ಇಂದು ಮಹಾನ್ ಸ್ವಾತಂತ್ರ್ಯ ಹೋರಾಟಗಾರ ಭಗವಾನ್ ಬಿರ್ಸಾ ಮುಂಡಾ ಅವರ ೧೫೦ ನೆ ಜನ್ಮದಿನ - ಜನಜಾತೀಯ ಗೌರವ ದಿವಸ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಪ್ರಧಾನಿ ಅವರು, ಸುಮಾರು ೬ ಸಾವಿರದ ೬ ನೂರು ಕೋಟಿ ರೂಪಾಯಿ ವೆಚ್ಚದ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳನ್ನು ಅನಾವರಣಗೊಳಿಸಿದರು .ಬುಡಕಟ್ಟು ಸಮಾಜದ ಕಲ್ಯಾಣಕ್ಕಾಗಿ ಇಂತಹ ದೂರದೃಷ್ಟಿ ಯೋಜನೆ ನಿರ್ದೇಶಿಸಿದ್ದಕ್ಕಾಗಿ ರಾಷ್ಟ್ರ ಪತಿ ದ್ರೌಪದಿ ಮುರ್ಮು ಅವರಿಗೆ ಪ್ರಧಾನಿಯವರು ಧನ್ಯವಾದ ಸಲ್ಲಿಸಿದರು. ವಿಧಾಯಕ ಕಾರ್ಯಕ್ರಮಗಳ ಮೂಲಕ ಬುಡಕಟ್ಟು ಸಮುದಾಯವನ್ನು ಮುಖ್ಯ ವಾಹಿನಿಗೆ ತರಲಾಗಿದೆ ಕೇಂದ್ರಸರ್ಕಾರ ಬುಡಕಟ್ಟು ಜನರ ಶಿಕ್ಷಣ, ಆರೋಗ್ಯ ಉಪಚಾರ, ಉದ್ಯೋಗಕ್ಕೆ ಒತ್ತು ನೀಡಿದೆ.ಸಿಕೆಲ್ ಕೋಶ ರೋಗ ನಿರ್ಮೂಲಗೊಳಿಸಲು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ೭೦೦ ಕ್ಕೂ ಅಧಿಕ ಏಕಲವ್ಯ ಶಾಲೆ ಗಳನ್ನು, ಬುಡಕಟ್ಟು ಸಂಶೋಧನಾ ಕೇಂದ್ರ ಹಾಗೂ ವಿಶ್ವವಿದ್ಯಾಲಯಗಳನ್ನು ತೆರೆಯಲಾಗಿದೆ ಎಂದರು. ಬುಡಕಟ್ಟು ಸಮುದಾಯದ ಪರಂಪರೆ, ಸಂಸ್ಕೃತಿ ಸಂರಕ್ಷಣೆಗೆ ಸರ್ಕಾರ ಬದ್ಧವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ಬಿರ್ಸಾ ಮುಂಡಾ ಸ್ಮರಣಾರ್ಥದ ವಿಶೇಷ ನಾಣ್ಯ ಹಾಗೂ ಅಂಚೆ ಚೀಟಿಗಳನ್ನು ಅವರು ಬಿಡುಗಡೆಗೊಳಿಸಿದರು. ಇದೇ ಸಂದರ್ಭದಲ್ಲಿ ಪಿಎಂ ಜನಜಾತಿ ಆದಿವಾಸಿ ನ್ಯಾಯ ಮಹಾ ಅಭಿಯಾನದಡಿ ಬುಡಕಟ್ಟು ಕುಟುಂಬಗಳಿಗಾಗಿ ನಿರ್ಮಿಸಲಾದ ೧೧ ಸಾವಿರ ಮನೆಗಳ ಗೃಹಪ್ರವೇಶ ಕಾರ್ಯಕ್ರಮ ದಲ್ಲಿ ಪ್ರಧಾನಿಯವರು ವರ್ಚುವಲ್ ಆಗಿ ಪಾಲ್ಗೊಂಡರು. ಭಗವಾನ್ ಬಿರ್ಸಾಮುಂಡಾ ಜಯಂತಿಯ ಅಂಗವಾಗಿ ಮೈಸೂರಿನ ಕೇರ್ಗಳಿಯ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನ ಸಂಸ್ಥೆಯಲ್ಲಿ ಆಯೋಜಿಸಿದ್ದ ಜನಜಾತೀಯ ಗೌರವ ದಿವಸ್ ಕಾರ್ಯಕ್ರಮವನ್ನು ಕೇಂದ್ರ ಸಚಿವ ಹೆಚ್.ಡಿ.ಕುಮಾರ್ ಸ್ವಾಮಿ ಉದ್ಘಾಟಿಸಿ, ಫಲಾನುಭವಿಗಳಿಗೆ ಜಾತಿಪ್ರಮಾಣ ಪತ್ರವನ್ನು ವಿತರಿಸಿದರು. ಎಚ್.ಡಿ.ಕೋಟೆ ತಾಲ್ಲೂಕಿನ ಸಿತಾರ, ನೇತ್ರಾವತಿ, ವರ್ಷ ಅವರಿಗೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಪಿರಿಯಾಪಟ್ಟಣ ತಾಲ್ಲೂಕಿನ ೩.೪೭ ಕೋಟಿ ತಾಲ್ಲೂಕಿನ ಆಲನಕಟ್ಟೆ ಹಾಡಿಯ ಗೀತಾ,ಸಿದ್ದ ಅವರಿಗೆ ಮನೆ ಬೀಗದ ಕೀ ವಿತರಣೆ, ಜನ್ ದನ್ ಯೋಜನೆಯಡಿ ಬ್ಯಾಂಕ್ ಖಾತೆಯ ಪಾಸ್ ಪುಸ್ತಕವನ್ನು ವೀರಯ್ಯ, ನಾಗಯ್ಯ,ಕರಿಯಯ್ಯ,ಅವರಿಗೆ ವಿತರಿಸಲಾಯಿತು. ಈ ವೇಳೆ ಸಂಸ್ಥೆಯಲ್ಲಿ ಏರ್ಪಡಿಸಿದ್ದ ದ್ವಿಮುಖ ಸಂಪರ್ಕ ಮೂಲಕ ಕಾರ್ಯಕ್ರಮದ ವೀಕ್ಷಣೆ ಹಾಗೂ ಪ್ರಧಾನ ಮಂತ್ರಿಗಳೊಂದಿಗೆ ಫಲಾನುಭವಿಗಳ ಜೊತೆ ಸಂವಾದವನ್ನು ನಡೆಸಲಾಯಿತು. ಕಾರ್ಯಕ್ರಮದಲ್ಲಿ ಸಣ್ಣ,ಅತಿ ಸಣ್ಣ ಕಾರ್ಮಿಕ ಸಚಿವೆ ಶೋಭಾ ಕರಂದ್ಲಾಜೆ ಮಾತನಾಡಿ, ಬುಡಕಟ್ಟು ಸಮುದಾಯಗಳಿಗೆ ಆರೋಗ್ಯ ಶಿಕ್ಷಣ, ಆರ್ಥಿಕ, ಸಾಮಾಜಿಕ ಸೌಲಭ್ಯ ದೊರೆಯಬೇಕು. ಕಂದಾಯ ಇಲಾಖೆ ಅಗತ್ಯ ಭೂಮಿಯನ್ನು ಕೊಡಿಸಿ ಮನೆ ನಿರ್ಮಾಣಕ್ಕೆ ಅವಕಾಶ ಕಲ್ಪಿಸಬೇಕು ಎಂದು ಹೇಳಿದರು.

**<><*<><>*><>**

ಮಹಾರಾಷ್ಟ್ರ ವಿಧಾನಸಭಾ ಚುನಾವಣೆಗಾಗಿ ವಿವಿಧ ರಾಜಕೀಯ ಪಕ್ಷಗಳಿಂದ ಭರದ ಪ್ರಚಾರ ನಡೆದಿದೆ. ಬಿಜೆಪಿ ಅಧ್ಯಕ್ಷ ಜೆ.ಪಿ.ನಡ್ಡಾ ಥಾಣೆಯಲ್ಲಿ ಸಾರ್ವಜನಿಕ ಸಭೆ ಉದ್ದೇಶಿಸಿ ಮಾತನಾಡಿ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ರಕ್ಷಣಾ ಕ್ಷೇತ್ರವನ್ನು ಸಶಕ್ತಗೊಳಿಸಿದೆ ಎಂದು ಹೇಳಿದರು. ಮತ್ತೊಬ್ಬ ಹಿರಿಯ ಧುರೀಣ ಕೇಂದ್ರ ಗೃಹ ಸಚಿವ ಅಮಿತ್ ಶಾ, ಕಾಂಗ್ರೆಸ್, ಹಿಮಾಚಲ ಪ್ರದೇಶ, ಕರ್ನಾಟಕ ಮತ್ತು ತೆಲಂಗಾಣಗಳಲ್ಲಿ ನೀಡಿದ ಭರವಸೆಗಳನ್ನು ಪೂರ್ತಿಗೊಳಿಸುವಲ್ಲಿ ವಿಫಲವಾಗಿದೆ ಎಂದು ಆರೋಪಿಸಿದರು. ಎನ್‌ಸಿಪಿ-ಎಸ್‌ಪಿ ಮುಖ್ಯಸ್ಥ ಶರದ್ ಪವರ್ ಅವರು, ಸಾಂಗ್ಲಿಯಲ್ಲಿ ಚುನಾವಣಾ ಪ್ರಚಾರ ಭಾಷಣ ಮಾಡಿ, ಬಿಜೆಪಿ ಸಂವಿಧಾನದಲ್ಲಿ ಬದಲಾವಣೆ ತರಲು ಯತ್ನಿಸುತ್ತಿದೆ ಎಂದು ಆಪಾದಿಸಿದರು. ಶಿವಸೇನಾ ಯುಬಿಟಿ ಮುಖ್ಯಸ್ಥ ಉದ್ಧವ್ ಠಾಕ್ರೆ, ಛತ್ರಪತಿ ಸಾಂಬಾಜಿ ನಗರದಲ್ಲಿ ಪ್ರಚಾರ ಭಾಷಣ ಮಾಡಿ, ತಮ್ಮ ಮೈತ್ರಿಕೂಟ ಅಧಿಕಾರಕ್ಕೆ ಬಂದರೆ ಸೋಯಬಿನ ನೀಡುವ ಕನಿಷ್ಠ ಬೆಂಬಲ ಬೆಲೆಯನ್ನು ಹೆಚ್ಚಿಸಲಿದೆ ಎಂದರು.

**<><*<><>*><>**

ಜಾರ್ಖಂಡ್‌ನಲ್ಲಿ ಎನ್‌ಡಿಎ ಹಾಗೂ ಐಎನ್‌ಡಿಐಎ ಮೈತ್ರಿಕೂಟಗಳಿಂದ ಎರಡನೇ ಹಂತದ ವಿಧಾನಸಭಾ ಚುನಾವಣೆಗಾಗಿ ಬಿರುಸಿನ ಪ್ರಚಾರ ನಡೆದಿದೆ. ಬಿಜೆಪಿ ಹಿರಿಯ ನಾಯಕ ಹಾಗೂ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಧನ್‌ಬಾದ್‌ನ ತಂಡಿಯಲ್ಲಿ ಚುನಾವಣಾ ರ್‍ಯಾಲಿ ಉದ್ದೇಶಿಸಿ ಮಾತನಾಡಿ, ಮುಖ್ಯಮಂತ್ರಿ ಹೇಮಂತ್ ಸೊರೆನ್ ನೇತೃತ್ವದ ಸರ್ಕಾರ ಪದಚ್ಯುತಗೊಳಿಸಿ ಬಿಜೆಪಿ ಪಕ್ಷವನ್ನು ಅಧಿಕಾರಕ್ಕೆ ತರುವ ಕಾಲ ಸನ್ನಿಹಿತವಾಗಿದೆ ಎಂದರು. ಕಾಂಗ್ರೆಸ್ ಧುರೀಣ ರಾಹುಲ್ ಗಾಂಧಿ, ಗೊಡ್ಡಾದಲ್ಲಿ ಮಾತನಾಡಿ, ತಮ್ಮ ಮೈತ್ರಿಕೂಟ ಅಧಿಕಾರಕ್ಕೆ ಬಂದರೆ ಕೊಟ್ಟ ಎಲ್ಲ ಭರವಸೆಗಳನ್ನು ಈಡೇರಿಸಲಿದೆ ಎಂದರು. ಆರ್‌ಜೆಡಿ ನಾಯಕ ತೇಜಸ್ವಿ ಪ್ರಸಾದ್ ಯಾದವರ್ ದೇವ್‌ಘರ್‌ದಲ್ಲಿ ಪ್ರಚಾರ ನಡೆಸಿದರು. ಜಾರ್ಖಂಡ್‌ನಲ್ಲಿ ಇದೇ ೨೦ ರಂದು ಎರಡನೇ ಹಂತದ ಮತದಾನ ನಡೆಯಲಿದೆ.

<><*<><>*><>

ಬ್ಯಾಟರಿ ಚಾಲಿತ ವಾಹನಗಳು ಹಸಿರು ಶಕ್ತಿ ಮತ್ತು ಪರಿಸರ ಸ್ನೇಹಿ ಸಾರಿಗೆಯ ಆಯ್ಕೆಯಾಗಿದೆ ಎಂದು ಕೇಂದ್ರ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ. ಅವರು, ಒಡಿಶಾದ ಜಗನ್ನಾಥ ದೇವಸ್ಥಾನದಲ್ಲಿ ಇಂದು ೧೦ ಬ್ಯಾಟರಿ ಚಾಲಿತ ವಾಹನಗಳಿಗೆ ಚಾಲನೆ ನೀಡಿ ಮಾತನಾಡಿದರು. ಜಗನ್ನಾಥಪುರಿಯ ಈ ಐತಿಹಾಸಿಕ ದೇವಾಲಯದಲ್ಲಿ ಬ್ಯಾಟರಿ ಚಾಲಿತ ವಾಹನಗಳ ನಿಯೋಜನೆ ಹಸಿರು ಶಕ್ತಿಗೆ ಕೇಂದ್ರ ಸರ್ಕಾರ ತೋರುತ್ತಿರುವ ಬದ್ಧತೆಗೆ ನಿದರ್ಶನವಾಗಿದೆ ಎಂದು ಪ್ರತಿಪಾದಿಸಿದರು.

<><*<><>*><>

ಭಾರತೀಯ ಗ್ರಿಡ್ ಮೂಲಕ ನೇಪಾಳದಿಂದ ಬಾಂಗ್ಲಾದೇಶದವರೆಗೆ, ರವಾನೆಯಾಗುವ ಮೊದಲ ತ್ರಿಪಕ್ಷೀಯ ವಿದ್ಯುತ್ ವಹಿವಾಟು ಇಂದು ಉದ್ಘಾಟನೆಗೊಂಡಿತು. ವಿದ್ಯುತ್ ಸಚಿವ ಮನೋಹರ್ ಲಾಲ್ ಅವರು ಬಾಂಗ್ಲಾದೇಶದ ವಿದ್ಯುತ್ ಸಚಿವಾಲಯ ಸಲಹೆಗಾರ ಫೌಜುಲ್ ಕಬೀರ್ ಖಾನ್ ಮತ್ತು ನೇಪಾಳದ ಇಂಧನ, ಜಲಸಂಪನ್ಮೂಲ ಮತ್ತು ನೀರಾವರಿ ಸಚಿವ ದೀಪಕ್ ಖಡ್ಕಾ ಅವರೊಂದಿಗೆ ಜಂಟಿಯಾಗಿ ವರ್ಚುವಲ್ ಈವೆಂಟ್ ಮೂಲಕ ಗ್ರಿಡ್ ಉದ್ಘಾಟಿಸಿದರು. ಇದು ಭಾರತೀಯ ಗ್ರಿಡ್ ಮೂಲಕ ನಿರ್ವಹಿಸಲಾಗುತ್ತಿರುವ ಐತಿಹಾಸಿಕ ಮೊದಲ ತ್ರಿಪಕ್ಷೀಯ ವಿದ್ಯುತ್ ರವಾನೆಯಾಗಿದೆ ಎಂದು ಭಾರತೀಯ ವಿದೇಶಾಂಗ ಸಚಿವಾಲಯ ತಿಳಿಸಿದೆ. ನೇಪಾಳದ ಮಾಜಿ ಪ್ರಧಾನಿ ಪುಷ್ಪ ಕಮಲ್ ದಹಲ್ ಪ್ರಚಂಡ ಅವರ, , ಭಾರತ ಭೇಟಿಯ ಸಂದರ್ಭದಲ್ಲಿ, ಭಾರತೀಯ ಗ್ರಿಡ್ ಮೂಲಕ ೪೦ಮೆಗಾ ವ್ಯಾಟ್ ವಿದ್ಯುತ್ ರಫ್ತನ್ನು ಸರ್ಕಾರ ಘೋಷಣೆ ಮಾಡಿತ್ತು. ಭೇಟಿಯ ಸಂದರ್ಭದಲ್ಲಿ, ಇಂಧನ ವಲಯ ಸೇರಿದಂತೆ ಹೆಚ್ಚಿನ ಉಪ-ಪ್ರಾದೇಶಿಕ ಸಹಕಾರದ ಕಡೆಗೆ ತಮ್ಮ ಬದ್ಧತೆಯನ್ನು ಎರಡೂ ದೇಶಗಳು ವ್ಯಕ್ತಪಡಿಸಿದ್ದರು. NTPC ವಿದ್ಯುತ್ ವ್ಯಾಪಾರ ನಿಗಮ, ನೇಪಾಳ ವಿದ್ಯುತ್ ಪ್ರಾಧಿಕಾರ ಮತ್ತು ಬಾಂಗ್ಲಾದೇಶದ ವಿದ್ಯುತ್ ಅಭಿವೃದ್ಧಿ ಮಂಡಳಿ ನಡುವೆ ತ್ರಿಪಕ್ಷೀಯ ವಿದ್ಯುತ್ ಮಾರಾಟ ಒಪ್ಪಂದಕ್ಕೆ ಈ ವರ್ಷದ ಅಕ್ಟೋಬರ್ ೩ ರಂದು ಕಠ್ಮಂಡುವಿನಲ್ಲಿ ಸಹಿ ಹಾಕಲಾಗಿತ್ತು.

<><*<><>*><>

ಶ್ರೀಲಂಕಾ ಸಂಸತ್ತಿಗೆ ನಡೆದ ಚುನಾವಣೆಯಲ್ಲಿ ಆಡಳಿತಾರೂಢ ನ್ಯಾಷನಲ್ ಪೀಪಲ್ಸ್ ಪವರ್ ಮೈತ್ರಿ ಕೂಟ ಭಾರೀ ಜಯ ಸಾಧಿಸಿದೆ. ಒಟ್ಟು ೨೨೫ ಸದಸ್ಯ ಬಲದ ಶ್ರೀಲಂಕಾ ಸಂಸತ್ತಿನ ಚುನಾವಣೆಯಲ್ಲಿ ಎಡ ಪಂಥೀಯ ಮೈತ್ರಿಕೂಟ ೧೫೯ ಸ್ಥಾನಗಳನ್ನು ಗೆದ್ದುಕೊಂಡಿದೆ. ಸಜಿತ್ ಪ್ರೇಮದಾಸ ನೇತೃತ್ವದ ಪ್ರಮುಖ ವಿರೋಧ ಪಕ್ಷ ೪೦ ಕ್ಷೇತ್ರಗಳಲ್ಲಿ ಜಯ ಗಳಿಸಿದೆ. ಇಲಂಕಿ ತಮಿಳ್ ಅರಸು ಕಡ್ಚಿ ಪಕ್ಷ ೮ ಸ್ಥಾನಗಳನ್ನು ಪಡೆದುಕೊಂಡಿದೆ. ಶ್ರೀಲಂಕಾದ ಮಾಜಿ ಅಧ್ಯಕ್ಷ ರಣಿಲ್ ವಿಕ್ರಮಾಸಿಂಘೆ ಮೈತ್ರಿಯ ನ್ಯೂ ಡೆಮಾಕ್ರಟಿಕ್ ಫ್ರಂಟ್ ೫ ಕ್ಷೇತ್ರಗಳಲ್ಲಿ ಜಯ ಪಡೆದುಕೊಂಡಿದೆ.

<><*<><>*><>

ದೇಶದಲ್ಲಿ ದೋಷ-ರಹಿತ ಪ್ರವೇಶ ಪರೀಕ್ಷೆಗಳನ್ನು ನಡೆಸಲು ಸರ್ಕಾರ ಬದ್ಧವಾಗಿದೆ ಎಂದು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ತಿಳಿಸಿದ್ದಾರೆ. ಇಂಡಿಯನ್ ಸ್ಕೂಲ್ ಆಫ್ ಬ್ಯುಸಿನೆಸ್-ಐ.ಎಸ್.ಬಿ ವತಿಯಿಂದ, ಹೈದರಾಬಾದ್‌ನಲ್ಲಿಂದು ಆಯೋಜಿಸಿದ್ದ, ೨ನೇ ಇನ್‌ಸೈಟ್ಸ್ ಫೋರಮ್‌ನ ನೇಪಥ್ಯದಲ್ಲಿ ಮಾಧ್ಯಮಗಳೊಂದಿಗೆ ಅವರು ಮಾತನಾಡಿದರು. ಡಾ.ರಾಧಾಕೃಷ್ಣ ಸಮಿತಿ, ಮಾಡಿದ ಬಹು ಆಯಾಮದ ಸುಧಾರಣೆಗಳ ಶಿಫಾರಸ್ಸುಗಳು ಪರಿಶೀಲನೆಯಲ್ಲಿವೆ. ಶಿಫಾರಸ್ಸುಗಳನ್ನು ಪರಿಶೀಲಿಸುವಂತೆ ರಾಷ್ಟ್ರೀಯ ಪರೀಕ್ಷಾ ಪ್ರಾಧಿಕಾರಕ್ಕೆ ಸೂಚಿಸಲಾಗಿದೆ ಎಂದು ಅವರು ತಿಳಿಸಿದರು. ಅನೇಕ ರಾಜ್ಯ ಸರ್ಕಾರಗಳೂ ಕೂಡ ಪ್ರವೇಶ ಪರೀಕ್ಷೆಗಳನ್ನು ನಡೆಸುತ್ತಿದ್ದು, ಸುಧಾರಣೆಗಳಲ್ಲಿ ಕೇಂದ್ರ ಸರ್ಕಾರದ ಜೊತೆ ಪಾಲುದಾರರಾಗಲು ರಾಜ್ಯಗಳಿಗೆ ಸೂಚಿಸಲಾಗಿದೆ ಎಂದು ಸಚಿವ ಧರ್ಮೇಂದ್ರ ಪ್ರಧಾನ್ ತಿಳಿಸಿದರು.

<><*<><>*><>

ದೇಶದ ಜಿಡಿಪಿ, ಮುಂದಿನ ೩ ಆರ್ಥಿಕ ವರ್ಷಗಳಲ್ಲಿ ಶೇಕಡ ೬.೫ ರಿಂದ ೭ರಷ್ಟು ಬೆಳವಣಿಗೆಯಾಗುವ ನಿರೀಕ್ಷೆಯಿದೆ. ಮೂಲಸೌಕರ್ಯ ಅಭಿವೃದ್ಧಿ ಮತ್ತು ಹೆಚ್ಚಿದ ಬೇಡಿಕೆಯಿಂದ ಪ್ರೇರಿತವಾದ ಭಾರತದ ಒಟ್ಟು ದೇಶೀಯ ಉತ್ಪನ್ನ-ಜಿಡಿಪಿ ಬೆಳವಣಿಗೆಯು, ರಚನಾತ್ಮಕ ಸುಧಾರಣೆಗಳು ಮತ್ತು ಉತ್ತಮ ಆರ್ಥಿಕ ನಿರೀಕ್ಷೆಗಳು, ಹಣಕಾಸು ಸಂಸ್ಥೆಗಳ ಸ್ಥಿತಿಸ್ಥಾಪಕತ್ವವನ್ನು ಬೆಂಬಲಿಸುತ್ತದೆ ಎಂದು ಎಸ್&ಪಿ ಜಾಗತಿಕ ರೇಟಿಂಗ್ಸ್ ತನ್ನ ಇತ್ತೀಚಿನ ಬ್ಯಾಂಕ್ ಔಟ್‌ಲುಕ್ ವರದಿಯಲ್ಲಿ ತಿಳಿಸಿದೆ. ಆರ್‌ಬಿಐ ಗವರ್ನರ್ ಶಕ್ತಿಕಾಂತ ದಾಸ್, ಮೂಲಸೌಕರ್ಯ ಅಭಿವೃದ್ಧಿ, ಹೂಡಿಕೆ ಮತ್ತು ಹೆಚ್ಚುತ್ತಿರುವ ಬೇಡಿಕೆಯಿಂದ ಪ್ರೇರಿತವಾದ ದೇಶದ ಬೆಳವಣಿಗೆಯು ಯಥಾ ಸ್ಥಿತಿಯಲ್ಲಿ ಮುಂದುವರೆಯಲಿದೆ ಎಂದು ಕಳೆದ ತಿಂಗಳು ಹೇಳಿದ್ದರು. ಭಾರತ ೨೦೨೪-೨೫ನೇ ಆರ್ಥಿಕ ವರ್ಷಕ್ಕೆ ಮೊದಲು ನೈಜ ಜಿಡಿಪಿ ಶೇಕಡಾ. ೬.೨ ರಷ್ಟು ಬೆಳವಣಿಗೆ ಹೊಂದಲಿದೆ ಎಂದು ಅವರು ಅಭಿಪ್ರಾಯ ಪಟ್ಟಿದ್ದರು.

<><*<><>*><>

ಹವಾಮಾನ ಬದಲಾವಣೆಯ ಪರಿಣಾಮಗಳು ಆಗಾಗ್ಗೆ ವಿಪತ್ತುಗಳ ರೂಪದಲ್ಲಿ ಹೆಚ್ಚು ಸ್ಪಷ್ಟವಾಗಿ ಗೋಚರಿಸುತ್ತಿವೆ ಎಂಬ ವಿಷಯವನ್ನು, ಅಜರ್‌ಬೈಜಾನ್‌ನ ಬಾಕುದಲ್ಲಿ ನಡೆದ ಕೋಪ್-೨೯ ಶೃಂಗಸಭೆಯಲ್ಲಿ, ಭಾರತವು ಪ್ರತಿಪಾದಿಸಿದೆ.

ಹವಾಮಾನ ಹಣಕಾಸು ಮೇಲಿನ ಉನ್ನತ ಮಟ್ಟದ ಸಚಿವಾಲಯ ಸಭೆಯಲ್ಲಿ ಸಮಾನ ಮನಸ್ಕ ಅಭಿವೃದ್ಧಿಶೀಲ ರಾಷ್ಟ್ರಗಳ ಪರವಾಗಿ ಭಾರತ ತನ್ನ ನಿಲುವನ್ನು ಈ ಮೂಲಕ ವ್ಯಕ್ತಪಡಿಸಿದೆ.

**<><*<><>*><>**

ಜೋಹಾನ್ಸ್‌ಬರ್ಗ್‌ನ ವಾಂಡರರ್ಸ್ ಕ್ರೀಡಾಂಗಣದಲ್ಲಿ ಇಂದು ಭಾರತ-ದಕ್ಷಿಣಾ ಆಫ್ರಿಕಾ ತಂಡಗಳ ನಡುವೆ ನಾಲ್ಕನೇ ಮತ್ತು ಅಂತಿಮ ಟಿ-೨೦ ಕ್ರಿಕೆಟ್ ಪಂದ್ಯ ನಡೆಯಲಿದೆ. ಪಂದ್ಯ ಭಾರತೀಯ ಕಾಲಮಾನ, ರಾತ್ರಿ ೮:೩೦ಕ್ಕೆ ಆರಂಭವಾಗಲಿದೆ. ನಾಲ್ಕು ಪಂದ್ಯಗಳ ಸರಣಿಯಲ್ಲಿ ಭಾರತ ೨-೧ ಮುನ್ನಡೆ ಸಾಧಿಸಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**